1224 (1079) ಶ್ರೀ ಸುನೀಲ್ ಕುಮಾರ್ ವಿ. (ಕಾರ್ಕಳ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಲಾನಯನ ಇಲಾಖೆಯಡಿಯಲ್ಲಿ ಈ ವರ್ಷ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು;

ಆ) ಉಡುಪಿ ಜಿಲ್ಲೆಯಲ್ಲಿ ಯಾವ ಯೋಜನೆಗಳನ್ನು ಕೈಗೊಳ್ಳ ಲಾಗುತ್ತಿದೆ;

ಇ) ಕಳೆದ ವರ್ಷದ ಸದರಿ ಇಲಾಖಾ ಕಾಮಗಾರಿಗಳು ಪೂರ್ಣ ಗೊಂಡಿವೆಯೇ;

ಈ) ಉಡುಪಿ ಜಿಲ್ಲೆಯ ಕಾಮಗಾರಿಗಳಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಂಡೆಪ್ಪ ಕಾಶೆಂಪೂರ್ (ಕೃಷಿ ಸಚಿವರು) :

ಅ) 2007–08ನೇ ಸಾಲಿನಲ್ಲಿ ಜಲಾನಯನ ಅಭಿವೃದ್ಧಿ ಇಲಾಖೆಗೆ ಈವರೆಗೆ ರೂ. 4240.25 ಲಕ್ಷ ಬಿಡುಗಡೆ ಮಾಡಲಾಗಿದೆ.

ಆ) 2007–08ನೇ ಸಾಲಿನ ಉಡುಪಿ ಜಿಲ್ಲೆಯಲ್ಲಿ ಕೈಗೊಳ್ಳಲಾ ಗುತ್ತಿರುವ ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳನ್ನು ಈ ಕೆಳಕಂಡಂತೆ ಹಮ್ಮಿಕೊಳ್ಳಲಾಗಿದೆ.

1. ಮಳೆಯಾಶ್ರಿತ ರಾಷ್ಟ್ರೀಯ ಜಲಾನಯನ ಅಭಿವೃದ್ಧಿ ಯೋಜನೆ
2. ಸಮಗ್ರ ಬಂಜರು ಭೂಮಿ ಅಭಿವೃದ್ಧಿ ಯೋಜನೆ
3. ಸುವರ್ಣ ಕೃಷಿ ಹೊಂಡ ಯೋಜನೆ
4. ನಬಾರ್ಡ್–RIDF-X

ಇ) ಕಳೆದ ವರ್ಷ ಸುವರ್ಣ ಕೃಷಿ ಹೊಂಡ ಹಾಗೂ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ಯೋಜನೆಯಡಿ (ನಬಾರ್ಡ್– RIDF-X) ಕೈಗೊಂಡ ಕಾಮಗಾರಿಗಳು ಪೂರ್ಣಗೊಂಡಿವೆ.

ಈ) ಹೌದು

ಉ) ಸಂಬಂಧಪಟ್ಟ ಅಧಿಕಾರಿಯನ್ನು ಅಮಾನತ್ತಿನಲಿಟ್ಟು ಶಿಸ್ತಿನ ಕ್ರಮ ಪ್ರಾರಂಭಿಸಲಾಗಿದೆ.